Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:20-09-2021 ರ ಸಭಾ ನಡವಳಿ

**ಸಂಖ್ಯೆ**:ಸ.ಕಾನಿ.ಅ (ಪು.ನ)/ಪಿಆರ್/22/21-22

ದಿನಾಂಕ: 20-09-2021 ರಂದು ಬೆಳಗ್ಗೆ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Smt. Suguna | R I |
| 5. | Sri Nagaraj | Tax Inspector |
| 6. | Sri Venkatesh | Horticulture Inspector |
| 7. | Sri Mahesh | J E Bescom |
| 8. | Sri Suresh | Ward Committee Member |
| 9. | Sri.Mahesh Kumar | Ward Committee Member |
| 10. | Sri. Mohan | Ward Committee Member |
| 11. | Sri Mani Maran | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 06-09-2021ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ದೊಡ್ಡಣ್ಣನಗರದಲ್ಲಿ ಸಿ.ಸಿ.ಕ್ಯಾಮರಗಳನ್ನು ಅಳವಡಿಸಲು ಮತ್ತು ಈಗಾಗಲೇ ಇರುವ ಸಿ.ಸಿ.ಕ್ಯಾಮರಗಳ ದುರಸ್ಥಿಯಾಗಿರುವ ಬಗ್ಗೆ ಸರಿಪಡಿಸಲು ಕೋರಿದ್ದು, ಸಂಬಂಧಪಟ್ಟ ಸಹಾಯಕ ಅಭಿಯಂತರರಾದ ಶ್ರೀ.ಯುವಕುಮಾರ್ ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
2. ಮುನಿಮಾರಪ್ಪ ಬ್ಲಾಕ್ 3ನೇ ಅಡ್ಡರಸ್ತೆಯಲ್ಲಿ ಹಳೇ ಬೋರ್‌ವೆಲ್ ರಿಪೇರಿ ಮಾಡಲಾಗಿದ್ದು, ಸದರಿ ಬೋರ್‌ವೆಲ್‌ಗೆ ಪೈಪ್‌ಲೈನ್ ಅಳವಡಿಸಲು ಚರ್ಚಿಸಲಾಗಿರುತ್ತದೆ.
3. ಮೋದಿ ಗಾರ್ಡನ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಈ ಕೆಳಕಂಡ ಕುಂದು ಕೊರತೆಗಳ ಬಗ್ಗೆ ವಾರ್ಡ್ ಕಮಿಟಿ ಸಭೆಯಲ್ಲಿ ಮನವಿ ಪತ್ರ ಸಲ್ಲಿಸಿ ಬಗೆಹರಿಸಲು ಕೋರಿರುತ್ತಾರೆ.
    1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಕಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಕಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ತಿಳಿಸಿರುತ್ತಾರೆ. ಅದರಂತೆ ಸದರಿ ಮನವಿ ಪತ್ರವನ್ನು BWSSB ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
    2. ಮೋದಿಗಾರ್ಡನ್‌ನ ಹೊಸ ರಸ್ತೆಯಲ್ಲಿ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಲು ತಿಳಿಸಿದ್ದು, ಸದರಿ ಕಾಮಗಾರಿಯ ಸ್ಥಳ ಪರಿಶೀಲಿಸಿ ಮುಂದಿನ ಕ್ರಮಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಗಿರುತ್ತದೆ.

3. ಮೋದಿಗಾರ್ಡನ್ ಹೊಸ ರಸ್ತೆಯ ಮಧ್ಯದಲ್ಲಿರುವ ಟ್ರಾನ್ಸ್‌ಫಾರ್ಮರ್‌ನ್ನು ಸ್ಥಳಾಂತರಿಸಲು ತಿಳಿಸಿರುತ್ತಾರೆ. ಅದರಂತೆ ಸದರಿ ಟ್ರಾನ್ಸ್‌ಫಾರ್ಮರ್‌ನ್ನು ಸ್ಥಳಾಂತರಿಸಲು ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.